# Akashvani : Bangalore
# National Bulletin In Kannada
# 28.02.2025 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

<u>ಮುಖ್ಯಾಂಶಗಳು</u>

**೧. ಐರೋಪ್ಯ ಆಯೋಗದ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ನಿಯೋಗ ಮಟ್ಟದ ಮಾತುಕತೆ**

**೨. ಬಾಂಗ್ಲಾದೇಶಿ, ರೋಹಿಂಗ್ಯಾ ಒಳನುಸುಳುಕೋರರ ತಡೆಗೆ ಕಠಿಣ ಕ್ರಮಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನಿರ್ದೇಶನ**

**೩. ವೇವ್ಸ್ ಎಕ್ಸ್‌ಪ್ಲೋರರ್ ಚಾಲೆಂಜ್: ಯೂಟ್ಯೂಬ್ ಕಿರುಚಿತ್ರ ಸ್ಪರ್ಧೆಗೆ ಆಹ್ವಾನ**

**೪. ಐಸಿಸಿ ಚಾಂಪಿಯನ್ಸ್ ಟ್ರೋಫಿ: ಆಸ್ಟ್ರೇಲಿಯಾಗೆ ೨೭೪ ರನ್‌ಗಳ ಗುರಿ ನೀಡಿದ ಅಫ್ಘಾನಿಸ್ತಾನ**

**<><*<><>*><>**

ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿಯವರು, ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯನ್ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಿದರು. ಎರಡು ದಶಕಗಳಿಗೂ ಹೆಚ್ಚಾಗಿ ಐರೋಪ್ಯ ಒಕ್ಕೂಟ ಮತ್ತು ಭಾರತದ ನಡುವೆ ಕಾರ್ಯತಂತ್ರದ ಪಾಲುದಾರಿಕೆಯ ಬದ್ಧತೆ ಇದ್ದು, ವಿಶ್ವಾಸ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿ ಹಿಡಿಯುದಲ್ಲಿ ನಿರಂತರತೆಯನ್ನು ಕಾಯ್ದುಕೊಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಭೆಯಲ್ಲಿ ಸುಸ್ಥಿರ ಅಭಿವೃದ್ಧಿ, ಜಾಗತಿಕ ವಾಣಿಜ್ಯ ವ್ಯವಹಾರ, ಸಮೃದ್ಧಿ, ಸೈಬರ್ ಭದ್ರತೆ, ಹವಾಮಾನ ಬದಲಾವಣೆ, ಭಯೋತ್ಪಾದಕತೆ ಸೇರಿದಂತೆ ಇಂಡೋ ಪೆಸಿಫಿಕ್ ವಲಯದಲ್ಲಿ ಶಾಂತಿ-ಸೌಹಾರ್ದತೆ, ಆರ್ಥಿಕತೆಯ ವೃದ್ಧಿ ಕುರಿತು ಚರ್ಚಿಸಲಾಯಿತು ಎಂದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ (೨೧ ಸೆಕೆಂಡ್ಸ್)**

ಭಾರತ ಮತ್ತು ಯೂರೋಪ್ ನಡುವೆ ಬಲವಾದ ಸಂಬಂಧವಿದ್ದು, ಪರಸ್ಪರ ಸಹಕಾರದಿಂದ ಉಭಯ ದೇಶಗಳ ನಡುವಿನ ಪ್ರತಿಭೆ, ತಂತ್ರಜ್ಞಾನದ ವಿನಿಮಯದ ಅಗತ್ಯತೆಯ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಇದೇ ವೇಳೆ ಭಾರತ-ಮಧ್ಯಪ್ರ್ಯಾಚ್ಯ-ಐರೋಪ್ಯ ಆರ್ಥಿಕ ಕಾರಿಡಾರ್ ಯೋಜನೆಯ ಮುಂದಿನ ನಡೆಯ ಬಗ್ಗೆ ಸಭೆಯಲ್ಲಿ ವಿಷಯ ಮಂಡಿಸಲಾಯಿತು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್, ನವದೆಹಲಿಯಲ್ಲಿ ಇಂದು ಐರೋಪ್ಯ ಆಯೋಗದ ರಕ್ಷಣಾ ಮತ್ತು ಬಾಹ್ಯಾಕಾಶ ಆಯುಕ್ತ ಆಂಡ್ರಿಯಸ್ ಕುಬಿಲಿಯಸ್ ಅವರೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ಅವರು ಇಂಡೋ-ಪೆಸಿಫಿಕ್ ಸಮುದ್ರ ಒಪ್ಪಂದಗಳು ಮತ್ತು ಮಾಹಿತಿ ಹಂಚಿಕೆಯನ್ನು ಕೇಂದ್ರೀಕರಿಸಿ, ಭಾರತ-ಐರೋಪ್ಯ ಒಕ್ಕೂಟದ ದ್ವಿಪಕ್ಷೀಯ ರಕ್ಷಣಾ ಮತ್ತು ಭದ್ರತಾ ಸಹಕಾರದ ಕುರಿತು ಸಮಗ್ರವಾಗಿ ಚರ್ಚಿಸಿದರು. ವಿಶೇಷವಾಗಿ ಐರೋಪ್ಯ ರಕ್ಷಣಾ ಕಂಪನಿಗಳ ಜಂಟಿ ಯೋಜನೆಗಳಲ್ಲಿ ಭಾಗವಹಿಸುವಿಕೆ ಮತ್ತು ಭಾರತದಲ್ಲಿನ ಸಹ-ಉತ್ಪಾದನಾ ಅವಕಾಶಗಳು ಹಾಗೂ ರಕ್ಷಣಾ-ಕೈಗಾರಿಕಾ ಸಹಕಾರವನ್ನು ಹೆಚ್ಚಿಸುವ ಮಾರ್ಗಗಳು ಮತ್ತು ವಿಧಾನಗಳ ಕುರಿತು ಚಿಂತನೆ ನಡೆಸಿದರು.

<><*<><>*><>

ಬಾಂಗ್ಲಾದೇಶಿ ಮತ್ತು ರೋಹಿಂಗ್ಯಾ ಒಳನುಸುಳುಕೋರರು ದೇಶವನ್ನು ಪ್ರವೇಶಿಸಲು ಮತ್ತು ಅವರ ವಾಸ್ತವ್ಯಕ್ಕೆ ಅನುಕೂಲವಾಗುವಂತೆ ಸಹಾಯ ಮಾಡುವ ಸಂಪೂರ್ಣ ಜಾಲದ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ದೆಹಲಿ ಪೊಲೀಸರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನಿರ್ದೇಶನ ನೀಡಿದ್ದಾರೆ. ನವದೆಹಲಿಯಲ್ಲಿ ಇಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ದೆಹಲಿ ಗೃಹ ಸಚಿವ ಆಶಿಶ್ ಸೂದ್, ದೆಹಲಿ ಪೊಲೀಸ್ ಆಯುಕ್ತರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆಯನ್ನು ಅಮಿತ್ ಶಾ ವಹಿಸಿದ್ದರು. ಅಕ್ರಮ ಒಳನುಸುಳುಕೋರರ ವಿಷಯವು ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದೆ. ಅದನ್ನು ಕಠಿಣ ವಿಧಾನದಿಂದ ನಿಭಾಯಿಸಬೇಕು. ಒಳನುಸುಳುಕೋರರನ್ನು ಗುರುತಿಸಿ, ಗಡೀಪಾರು ಮಾಡುವಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೂಚಿಸಿದ್ದಾರೆ.

<><*<><>*><>

ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿ ಹಿಮಪಾತದಲ್ಲಿ ಸಿಲುಕಿರುವ ಜನರನ್ನು ಸುರಕ್ಷಿತವಾಗಿ ಸ್ಥಳಾಂತರಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ

ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಈ ಸಂಬಂಧ ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ, ಇಂಡೋ ಟಿಬೆಟಿಯನ್ ಗಡಿ ಪೊಲೀಸ್ ಮಹಾನಿರ್ದೇಶಕರು ಮತ್ತು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆಯ ಮಹಾನಿರ್ದೇಶಕರೊಂದಿಗೆ ಚರ್ಚಿಸಲಾಗಿದೆ ಎಂದು ತಿಳಿಸಿದರು. ಸ್ಥಳೀಯ ಆಡಳಿತವು ಅತ್ಯಂತ ತುರ್ತಾಗಿ ರಕ್ಷಣಾ ಕಾರ್ಯಾಚರಣೆಯಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಿದೆ ಮತ್ತು ಎರಡು ಎನ್‌ಡಿಆರ್‌ಎಫ್ ತಂಡಗಳು ಶೀಘ್ರದಲ್ಲೇ ಘಟನಾ ಸ್ಥಳಕ್ಕೆ ತಲುಪಲಿವೆ ಎಂದು ಅವರು ಹೇಳಿದರು. ಭಾರತೀಯ ಸೇನೆಯ ಪ್ರಕಾರ, ಮಾನಾ ಮತ್ತು ಬದರಿನಾಥ್ ನಡುವೆ ಇರುವ ಗಡಿ ರಸ್ತೆ ಸಂಸ್ಥೆ-ಬಿಆರ್‌ಒ ಕಾರ್ಮಿಕ ಶಿಬಿರವು ಹಿಮಪಾತಕ್ಕೆ ತುತ್ತಾಗಿ, ೫೭ ಕಾರ್ಮಿಕರು ಮೃತಪಟ್ಟಿದ್ದಾರೆ.

**<><*<><>*><>**

೨೦೨೪-೨೦೨೫ನೇ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ ದೇಶದ ಜಿಡಿಪಿ ಶೇಕಡ ೬.೨ ರಷ್ಟು ಬೆಳವಣಿಗೆ ಕಂಡಿದ್ದು, ಭಾರತವು ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಮುಂದುವರಿದಿದೆ. ಇದು ಹಿಂದಿನ ತ್ರೈಮಾಸಿಕದಲ್ಲಿ ಪರಿಷ್ಕೃತ ಜಿಡಿಪಿ ದರವಾದ ೫.೬ ಕ್ಕಿಂತ ತುಸು ಏರಿಕೆಯಾಗಿದೆ. ಕಳೆದ ಹಣಕಾಸು ವರ್ಷದ ಮೂರನೇ ತ್ರೈಮಾಸಿಕದಲ್ಲಿ ಭಾರತ, ಶೇಕಡ ೮.೬ ರಷ್ಟು ಜಿಡಿಪಿ ಬೆಳವಣಿಗೆಯನ್ನು ದಾಖಲಿಸಿದೆ. ಗ್ರಾಮೀಣ ಬಳಕೆಯಲ್ಲಿನ ಹೆಚ್ಚಳವು ಮೂರನೇ ತ್ರೈಮಾಸಿಕದಲ್ಲಿ ಜಿಡಿಪಿ ಹೆಚ್ಚಳಕ್ಕೆ ಕಾರಣವಾಗಿದೆ. ಸಾಂಖಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ಬಿಡುಗಡೆ ಮಾಡಿದ ಮೊದಲ ಪರಿಷ್ಕೃತ ಅಂದಾಜಿನ ಪ್ರಕಾರ, ೨೦೨೪-೨೫ನೇ ಹಣಕಾಸು ವರ್ಷದಲ್ಲಿ ನೈಜ ಜಿಡಿಪಿ ಶೇಕಡ ೬.೫ ರಷ್ಟು ಬೆಳವಣಿಗೆ ಕಾಣುವ ನಿರೀಕ್ಷೆಯಿದೆ ಮತ್ತು ಸಾಮಾನ್ಯ ಜಿಡಿಪಿ ಶೇಕಡ ೯.೯ ರಷ್ಟು ಬೆಳವಣಿಗೆ ಕಾಣುವ ನಿರೀಕ್ಷೆಯಿದೆ.

**<><*<><>*><>**

ವಿಶ್ವ ಶ್ರವಣ ದೃಶ್ಯ ಮನೋರಂಜನಾ ಶೃಂಗಸಭೆ-ವೇವ್ಸ್, 'ವೇವ್ಸ್ ಎಕ್ಸ್‌ಪ್ಲೋರರ್ ಚಾಲೆಂಜ್' ಮೂಲಕ ಕ್ರಿಯೇಟರ್‌ಗಳು ಮತ್ತು ಕಥೆಗಾರರಿಗೆ ಯೂಟ್ಯೂಬ್ ಕಿರುಚಿತ್ರಗಳನ್ನು ಸಿದ್ಧಪಡಿಸುವ ಮೂಲಕ ಭಾರತದ ಕುರಿತು ತಮ್ಮ ದೃಷ್ಟಿಕೋನವನ್ನು ಪ್ರದರ್ಶಿಸಲು ಒಂದು ಅತ್ಯಾಕರ್ಷಕ ಅವಕಾಶವನ್ನು ನೀಡುತ್ತಿದೆ. ತಮ್ಮ ಕಿರುಚಿತ್ರದಲ್ಲಿ ಭಾರತದ ವೈವಿಧ್ಯತೆ, ದೃಢತೆ ಮತ್ತು ಸೃಜನಶೀಲ ಮನೋಭಾವವನ್ನು ಸೆರೆಹಿಡಿಯಬೇಕು. ವಿಷಯವು ಸ್ವಂತದ್ದಾಗಿರಬೇಕು ಮತ್ತು ಈ ಸವಾಲಿಗಾಗಿ ನಿರ್ದಿಷ್ಟವಾಗಿ ರಚಿಸಬೇಕು. ವ್ಲಾಗ್‌ನ ಗರಿಷ್ಠ ಅವಧಿ ಏಳು ನಿಮಿಷಗಳು, ಆದರೆ ಕಿರು ರೂಪದ ವೀಡಿಯೊಗಳಿಗೆ ಇದು ಒಂದು ನಿಮಿಷ. ಭಾರತೀಯ ಅಂತರ್ಜಾಲ ಮತ್ತು ಮೊಬೈಲ್ ಸಂಘಟನೆಯು, ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಹಭಾಗಿತ್ವದಲ್ಲಿ ಆಯೋಜಿಸಿರುವ

'ವೇವ್ಸ್ ಎಕ್ಸ್‌ಪ್ಲೋರರ್ ಚಾಲೆಂಜ್', ವೇವ್ಸ್ ಅಡಿಯಲ್ಲಿ ಪ್ರಮುಖ ಉಪಕ್ರಮವಾದ ಕ್ರಿಯೇಟ್ ಇನ್ ಇಂಡಿಯಾದ ಭಾಗವಾಗಿದೆ. ಇದು ಮೇ ೧ ರಿಂದ ೪ ರವರೆಗೆ ಮುಂಬೈನ ಜಿಯೋ ವಿಶ್ವ ಸಮಾವೇಶ ಕೇಂದ್ರ ಮತ್ತು ಜಿಯೋ ವರ್ಲ್ಡ್ ಗಾರ್ಡನ್ಸ್‌ನಲ್ಲಿ ನಡೆಯಲಿದೆ.

<><*<><>*><>

ದೇಶವು ಸಮೃದ್ಧಿಯ ಹಾದಿಯಲ್ಲಿ ಮುನ್ನಡೆಯುತ್ತಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದ್ದಾರೆ. ನವದೆಹಲಿಯಲ್ಲಿಂದು 'ವಿಕಸಿತ ಭಾರತ-೨೦೪೭' ಕುರಿತಾದ ವಿಚಾರ ಸಂಕಿರಣವನ್ನುದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಹಣಕಾಸು ಕಾನೂನುಗಳನ್ನು ಸರಳ ಮತ್ತು ಪಾರದರ್ಶಕಗೊಳಿಸುವ ದಿಕ್ಕಿನಲ್ಲಿ ಹೇಗೆ ಕಾರ್ಯನಿರ್ವಹಿಸುತ್ತಿದೆ ಎಂಬುದನ್ನು ವಿವರಿಸಿದರು. ಭಾರತವು ಈಗ ಉತ್ತಮ ಹೂಡಿಕೆ ವಾತಾವರಣವನ್ನು ಹೊಂದಿದೆ. ಹೂಡಿಕೆದಾರರು ಹೂಡಿಕೆಗಾಗಿ ಭಾರತದತ್ತ ನೋಡುತ್ತಿದ್ದಾರೆ ಎಂದರು. ಸುಸ್ಥಿರ ಬದುಕಿನಲ್ಲಿ ಭಾರತವು ಜಗತ್ತನ್ನು ಮುನ್ನಡೆಸುತ್ತಿದೆ. ಭಾರತೀಯ ಹಣಕಾಸು ಸಂಸ್ಥೆಗಳನ್ನು ಪ್ರಪಂಚದಾದ್ಯಂತ ಗೌರವಿಸಲಾಗುತ್ತಿದೆ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದರು.

<><*<><>*><>

ದೇಶಾದ್ಯಂತ ಇಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಯಿತು. ಖ್ಯಾತ ಭೌತಶಾಸ್ತ್ರಜ್ಞ ಸರ್ ಸಿ.ವಿ.ರಾಮನ್ ಅವರ 'ರಾಮನ್ ಪರಿಣಾಮ'ದ ಆವಿಷ್ಕಾರದ ಸ್ಮರಣಾರ್ಥ ಪ್ರತಿ ವರ್ಷ ಫೆಬ್ರವರಿ ೨೮ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಈ ಪರಿವರ್ತನಾಶೀಲ ಆವಿಷ್ಕಾರಕ್ಕಾಗಿ ಸರ್ ರಾಮನ್ ಅವರಿಗೆ ೧೯೩೦ ರಲ್ಲಿ ನೊಬೆಲ್ ಪ್ರಶಸ್ತಿ ಪ್ರದಾನ ಮಾಡಲಾಯಿತು. ರಾಷ್ಟ್ರೀಯ ವಿಜ್ಞಾನ ದಿನದ ಹಿನ್ನೆಲೆಯಲ್ಲಿ ದೇಶಾದ್ಯಂತ ವಿವಿಧ ವಿಜ್ಞಾನ ವಿಷಯಾಧಾರಿತ ಚಟುವಟಿಕೆಗಳು ಹಾಗೂ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

<><*<><>*><>

ಚೀನಾದಿಂದ ಆಮದು ಮಾಡಿಕೊಳ್ಳುವ ವಸ್ತುಗಳ ಮೇಲೆ ಶೇಕಡ ೧೦ ರಷ್ಟು ಹೆಚ್ಚುವರಿ ಸುಂಕ ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಈಗಾಗಲೇ ಈ ತಿಂಗಳ ಆರಂಭದಿಂದ ಚೀನಾದ ಆಮದುಗಳ ಮೇಲೆ ಕನಿಷ್ಠ ೧೦ ಪ್ರತಿಶತ ತೆರಿಗೆಯನ್ನು ವಿಧಿಸಲಾಗಿತ್ತು. ಮಾರ್ಚ್ ೪ರಿಂದ ಕೆನಡಾ ಮತ್ತು ಮೆಕ್ಸಿಕೊದಿಂದ ಆಮದು ಮಾಡಿಕೊಳ್ಳುವ ವಸ್ತುಗಳ ಮೇಲೆ ಕೂಡ ಶೇಕಡ ೨೫ ರಷ್ಟು ಸುಂಕವನ್ನು ವಿಧಿಸಲಾಗುವುದೆಂದು ನಿನ್ನೆ ರಾತ್ರಿ, ಟ್ರಂಪ್ ದೃಢಪಡಿಸಿದ್ದಾರೆ. ಈ ಕ್ರಮವನ್ನು ತಪ್ಪಿಸಲು ಮೆಕ್ಸಿಕೋ ಮತ್ತು ಕೆನಡಾದ ಅಧಿಕಾರಿಗಳು

ವಾಷಿಂಗ್ಟನ್‌ನಲ್ಲಿ ಚರ್ಚೆಯಲ್ಲಿ ತೊಡಗಿದ್ದಾಗಲೇ ಅಮೆರಿಕ ಅಧ್ಯಕ್ಷರಿಂದ ಈ ನಿರ್ಧಾರ ಪ್ರಕಟವಾಗಿದೆ.

**<><*<><>*><>**

ಪಾಕಿಸ್ತಾನದ ಗದ್ದಾಫಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಟೂರ್ನಿಯ 'ಬಿ' ಗುಂಪಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ಅಫ್ಘಾನಿಸ್ತಾನ ತಂಡಗಳು ಮುಖಾಮುಖಿಯಾಗಿವೆ. ಮೊದಲು ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ, ನಿಗದಿತ ೫೦ ಓವರ್‌ಗಳಲ್ಲಿ ೨೭೩ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಈ ಗುರಿಯನ್ನು ಬೆನ್ನತ್ತಿರುವ ಆಸ್ಟ್ರೇಲಿಯಾ, ಇತ್ತೀಚಿನ ವರದಿಯಂತೆ ೧೨.೫ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೧೦೯ ರನ್ ಮಾಡಿದ್ದು, ಪಂದ್ಯಕ್ಕೆ ಮಳೆ ಅಡ್ಡಿಯಾಗಿದೆ.

**<><*<><>*><>**

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳಾ ಪ್ರಿಮೀಯರ್ ಲೀಗ್-ಡಬ್ಲ್ಯೂಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**